(1)

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ 2012-13ನೇ ಸಾಲಿನ ಯೋಜನೇತರ ಅಡಿಯಲ್ಲಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.**

**ಓದಲಾಗಿದೆ :-**

1. ಸರ್ಕಾರದ ಆದೇಶ ಸಂಖ್ಯೆ : ಕೃಇ 25 ಕೃವಿರಾ 2012, ದಿನಾಂಕ : 04-06-2012.
2. ಸರ್ಕಾರದ ಆದೇಶ ಸಂಖ್ಯೆ : ಕೃಇ 25 ಕೃವಿರಾ 2012, ದಿನಾಂಕ : 09-08-2012.
3. ಸರ್ಕಾರದ ಆದೇಶ ಸಂಖ್ಯೆ : ಕೃಇ 25 ಕೃವಿರಾ 2012, ದಿನಾಂಕ : 06-11-2012.
4. ಸರ್ಕಾರದ ಆದೇಶ ಸಂಖ್ಯೆ : ಕೃಇ 25 ಕೃವಿರಾ 2012, ದಿನಾಂಕ : 26-02-2013.
5. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು, ಇವರ ದಿನಾಂಕ : 09-01-2013ರ ಪತ್ರ ಸಂಖ್ಯೆ : ಕು/ಕೃವಿವಿರಾ/243/2012-13.

**ಪ್ರಸ್ತಾವನೆ :-**

ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಉದ್ದೇಶಕ್ಕಾಗಿ ಸರ್ಕಾರವು 2012-13ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 2415-80-004-3-00 (ಸಹಾಯಾನುದಾನ-101) ಅಡಿಯಲ್ಲಿ ರೂ. 2500.00 ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಿದ್ದು, ಅದರಲ್ಲಿ ತ್ರೈಮಾಸಿಕ ಕಂತುಗಳಲ್ಲಿ ತಲಾ ರೂ. 625.00 ಲಕ್ಷಗಳನ್ನು ಕ್ರಮವಾಗಿ ಮೇಲೆ (1), (2), (3) ಮತ್ತು (4)ರಲ್ಲಿ ಓದಲಾದ ದಿನಾಂಕ : 04-06-2012, 09-08-2012, 06-11-2012 ಮತ್ತು 26-02-2012ರ ಆದೇಶಗಳಂತೆ ಒಟ್ಟು ರೂ. 2500.00 ಲಕ್ಷಗಳ ಪೂರ್ಣ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ (5)ರಲ್ಲಿ ಓದಲಾದ ರಾಯಚೂರು ಕೃಷಿ ವಿಶ್ವವಿದ್ಯಾಲಯದ ದಿನಾಂಕ : 09-01-2013ರ ಪತ್ರದಲ್ಲಿ ಕೃಷಿ ವಿಶ್ವವಿದ್ಯಾಲಯ, 2011-12ನೇ ಸಾಲಿಗೆ ಸರ್ಕಾರವು ಬಿಡುಗಡೆ ಮಾಡಿದ ಅನುದಾನದ ಕೊರತೆಯ ಜೊತೆಗೆ 2012ರ ಏಪ್ರಿಲ್ ತಿಂಗಳಿನಿಂದ ರಾಯಚೂರಿನ ಬೋಧಕೇತರ ನೌಕರರಿಗೆ 6ನೇ ವೇತನ ಆಯೋಗದ ವೇತನ ಪರಿಷ್ಕರಣೆ ಮಾಡಲಾಗಿದ್ದು, ಹೆಚ್ಚುವರಿಯಾಗಿ ಸಿಬ್ಬಂದಿಯ ಸಂಬಳವನ್ನು ಪರಿಷ್ಕರಿಸಿದ್ದರಿಂದ ಯೋಜನೇತರ ಅಡಿಯಲ್ಲಿ ಅನುದಾನದ ಕೊರತೆಯಾಗಿದ್ದು ಹೆಚ್ಚುವರಿಯಾಗಿ ಮಂಜೂರು ಮಾಡಿ ಬಿಡುಗಡೆ ಮಾಡುವಂತೆ ಪ್ರಸ್ತಾಪಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಕೃಇ 25 ಕೃವಿರಾ 2012,**

**ಬೆಂಗಳೂರು, ದಿನಾಂಕ : 11-03-2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ 2012-13ನೇ ಸಾಲಿನಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವೇತನವನ್ನು ಭರಿಸಲು ಅವಶ್ಯವಿರುವ ರೂ. 164.76 ಲಕ್ಷಗಳ ಹೆಚ್ಚುವರಿ ಅನುದಾನವನ್ನು ಪೂರಕ ಅಂದಾಜು-3ರಲ್ಲಿ ನಿಗಧಿಪಡಿಸಿರುವಂತೆ ಲೆಕ್ಕಶೀರ್ಷಿಕೆ 2415-80-004-3-00-101 ಅಡಿಯಲ್ಲಿ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ :-

1. ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;

2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
6. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ರಾಯಚೂರು, ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ : 16-02-2013ರ ಟಿಪ್ಪಣಿ ಸಂಖ್ಯೆ : ಆಇ 488 ವೆಚ್ಚ-4/2012ರಲ್ಲಿ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ. ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಕೃಷಿ ಯೋಜನೆ)

ಇವರಿಗೆ :-

1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ), ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
3. ಜಿಲ್ಲಾ ಖಜಾನಾಧಿಕಾರಿಗಳು, ರಾಯಚೂರು.
4. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
5. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ರಾಯಚೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.